ಕರ್ನಾಟಕ ಸರ್ಕಾರ
ಪಂಚಾಯತ್ ರಾಜ್ ಆಯುಕ್ತಾಲಯ
ಕಾಳಿದಾಸ ಮಾರ್ಗ, ಕೆ.ಜಿ.ರಸ್ತೆ, ಬೆಂಗಳೂರು – 560 009.

ಸಂಖ್ಯೆ:ಕಪಂರಾಆ/ಅಭಿವೃದ್ಧಿ/ಗ್ರಂಥಾಲಯ/338/2023 ದಿನಾಂಕ:31.07.2023
C.No:1143097

# ಸುತ್ತೋಲೆ

**ವಿಷಯ:-** ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಮಕ್ಕಳಿಗೆ ಚಟುವಟಿಕೆಗಳನ್ನು ಆಯೋಜಿಸುವ ಕುರಿತು.

***

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಮಕ್ಕಳು ಓದುವುದರಲ್ಲಿ ಮತ್ತು ಕಲಿಕೆಯಲ್ಲಿ ತೊಡಗಿಸಿಕೊಳ್ಳಲು "ಓದುವ ಬೆಳಕು" ಕಾರ್ಯಕ್ರಮವನ್ನು ಆರಂಭಿಸಲಾಗಿದೆ. ಸದರಿ ಕಾರ್ಯಕ್ರಮದ ಮೂಲಕ ಶಾಲಾ ಮಕ್ಕಳನ್ನು, ವಿಶೇಷವಾಗಿ ಗ್ರಾಮೀಣ ಮಕ್ಕಳನ್ನು ವ್ಯವಸ್ಥಿತವಾಗಿ ಕಲಿಕಾ ಕ್ಷೇತ್ರಕ್ಕೆ ಮರಳಿ ತರುವ ಹಾಗೂ ನಿರಂತರತೆಯನ್ನು ಕಾಪಾಡುವ ಗುರಿಯನ್ನು ಹೊಂದಲಾಗಿದೆ. ಗ್ರಂಥಾಲಯಗಳನ್ನು ಗ್ರಾಮೀಣ ಜ್ಞಾನ ಕೇಂದ್ರಗಳನ್ನಾಗಿಸಲು ಗ್ರಂಥಾಲಯಗಳ ನವೀಕರಣ, ಡಿಜಿಟಲೀಕರಣ ಸೇರಿದಂತೆ ವಿವಿಧ ಕ್ರಮಗಳನ್ನು ಈಗಾಗಲೇ ಕೈಗೊಳ್ಳಲಾಗಿದೆ.

ಮುಂದುವರೆದು, ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ಹಲವಾರು ಅಭಿಯಾನಗಳ ಮೂಲಕ ಪ್ರತಿ ತಿಂಗಳು ಮಕ್ಕಳಿಗೆ ಉಪಯುಕ್ತ ಚಟುವಟಿಕೆಯನ್ನು ಆಯೋಜಿಸಿ, ಗ್ರಂಥಾಲಯಗಳನ್ನು ಸದುಪಯೋಗಪಡಿಸಿಕೊಳ್ಳಲು ಅವಕಾಶ ಕಲ್ಪಿಸಲಾಗುತ್ತಿದೆ. ಅದರಂತೆ, ಆಗಸ್ಟ್-2023ರ ಮಾಹೆಯಲ್ಲಿ ಸ್ವಾತಂತ್ರ್ಯ ದಿನಾಚರಣೆಯ ಪ್ರಯುಕ್ತ ಗ್ರಂಥಾಲಯಕ್ಕೆ ಬರುವ ಮಕ್ಕಳಿಗೆ ಚಟುವಟಿಕೆಗಳನ್ನು ಆಯೋಜಿಸಲು ತೀರ್ಮಾನಿಸಲಾಗಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು **ಆಗಸ್ಟ್-2023 ಮಾಹೆಯ ಪೂರ್ಣ "ಭಾರತ ಸ್ವಾತಂತ್ರ್ಯ ದಿನಾಚರಣೆ"** ಸಂಭ್ರಮೋತ್ಸವವನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳಲ್ಲಿ ಆಚರಿಸಲು ಈ ಕೆಳಗಿನಂತೆ ಚಟುವಟಿಕೆಗಳನ್ನು ಆಯೋಜಿಸಲು ನಿರ್ಧರಿಸಿದೆ.

**ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದಲ್ಲಿ ಕೈಗೊಳ್ಳಬೇಕಾದ ಚಟುವಟಿಕೆಗಳು:**

- **ತ್ರಿವರ್ಣ ಧ್ವಜ ಮತ್ತು ಬ್ಯಾಡ್ಜ್ ತಯಾರಿಸುವುದು–** ಗ್ರಂಥಾಲಯ ಮೇಲ್ವಿಚಾರಕರು ಆಗಸ್ಟ್ ತಿಂಗಳಿನಲ್ಲಿ ಗ್ರಂಥಾಲಯಕ್ಕೆ ಬರುವ ಎಲ್ಲಾ ಮಕ್ಕಳನ್ನು ಖಾತರಿಪಡಿಸಿಕೊಂಡು, ಅಂತಹ ಮಕ್ಕಳಿಗೆ ತ್ರಿವರ್ಣ ಧ್ವಜ ಮತ್ತು ಬ್ಯಾಡ್ಜ್ ತಯಾರಿಸಲು ತಿಳಿಸುವುದು.

- ಗ್ರಂಥಾಲಯದಲ್ಲಿ ಮಕ್ಕಳು ಬಣ್ಣಗಳು ಮತ್ತು ಕಾಗದದೊಂದಿಗೆ ಸಮಯ ಕಳೆಯಬೇಕು ಮತ್ತು ತ್ರಿವರ್ಣ ಧ್ವಜ ಹಾಗೂ ಬ್ಯಾಡ್ಜ್‌ನ್ನು ಬಟ್ಟೆ ಪಿನ್‌ನೊಂದಿಗೆ ತಯಾರಿಸಬೇಕು. ಈ ಬ್ಯಾಡ್ಜ್‌ನ್ನು ಅವರು ಆಗಸ್ಟ್ 15 ರಂದು ತಮ್ಮ ಶಾಲೆಯ ಧ್ವಜಾರೋಹಣ ಸಮಾರಂಭ ಹಾಗೂ ಆಚರಣೆಗಳಲ್ಲಿ ಧರಿಸಲು ತಿಳಿಸುವುದು.

- **ಸಂವಿಧಾನದ ಓದು–** ಸ್ವಾತಂತ್ರ್ಯ ದಿನಾಚರಣೆಯ ದಿನದಂದು ಸಂವಿಧಾನದ ಮೂಲ ಆಶಯಗಳ ಬಗ್ಗೆ ಮಕ್ಕಳಲ್ಲಿ ಚಿಕ್ಕ ವಯಸ್ಸಿನಲ್ಲಿಯೇ ಅರಿವು ಮೂಡಿಸಲು ಭಾರತ ಸಂವಿಧಾನದ ಪೀಠಿಕೆ(Preamble)ಯನ್ನು ಸಾಮೂಹಿಕವಾಗಿ ಓದುವಂತೆ ಕ್ರಮವಹಿಸುವುದು.

- ಭಾರತ ಸಂವಿಧಾನದ ಪೀಠಿಕೆ(Preamble) ಪ್ರತಿಯನ್ನು ನೀಡಿ ಮಕ್ಕಳಿಂದ ಬರೆಯಿಸಿ ಅದರ ಸುತ್ತಲೂ ವಿವಿಧ ಬಣ್ಣಗಳಿಂದ ಸುಂದರವಾದ ಚೌಕಟ್ಟನ್ನು ಮಕ್ಕಳಿಂದ ರಚಿಸುವುದು. ಮಕ್ಕಳು ತಮ್ಮ ತಮ್ಮ ಮನೆಗಳಲ್ಲಿ ತಾವೇ ರಚಿಸಿದ ಸಂವಿಧಾನದ ಪೀಠಿಕೆಯ ಕಲಾಕೃತಿಯನ್ನು ಪ್ರದರ್ಶಿಸುವಂತೆ ತಿಳಿಸುವುದು.

- **ದೇಶಭಕ್ತಿ ಗೀತ ಗಾಯನ–** ಗ್ರಂಥಾಲಯ ಮೇಲ್ವಿಚಾರಕರು ಸ್ವಾತಂತ್ರ್ಯ ದಿನದ ಹಾಡುಗಳು ಹಾಗೂ ದೇಶಭಕ್ತಿ ಗೀತೆಗಳನ್ನು ಅಭ್ಯಾಸ ಮಾಡಲು ಮಕ್ಕಳನ್ನು ಒಟ್ಟುಗೂಡಿಸಬೇಕು. ಇದರಿಂದಾಗಿ ಗುಂಪು ಚಟುವಟಿಕೆಯ ಮೂಲಕ ಮತ್ತು ವೈಯಕ್ತಿಕವಾಗಿ ಮಕ್ಕಳು ಕನ್ನಡದಲ್ಲಿ ಹಾಡುಗಳನ್ನು ಕಲಿಯುತ್ತಾರೆ. ಮಕ್ಕಳು ಕಲಿತ ಹಾಡನ್ನು ಸ್ವಾತಂತ್ರ್ಯ ದಿನದಂದು ಅವರ ಶಾಲೆಗಳಲ್ಲಿ ಅಥವಾ ಗ್ರಂಥಾಲಯದಲ್ಲಿ ಹಾಡಬಹುದು. ಇದರಿಂದ ಮಕ್ಕಳ ಪಾಲ್ಗೊಳ್ಳುವಿಕೆ ಮತ್ತು ಉತ್ತಮ ಆಚರಣೆ ಸಾಧ್ಯವಾಗುತ್ತದೆ ಹಾಗೂ ಮಕ್ಕಳು ಹಾಡುವುದನ್ನು ವಿಡಿಯೋ ಮಾಡುವುದು. ಈ ಚಟುವಟಿಕೆಯು ಮಕ್ಕಳಲ್ಲಿ ವಿಶ್ವಾಸ ಮತ್ತು ದೇಶಭಕ್ತಿಯನ್ನು ಮೂಡಿಸುತ್ತದೆ.
- **ಸ್ವಾತಂತ್ರ್ಯ ಹೋರಾಟಗಾರರ ಪರಿಚಯ–** ಗ್ರಂಥಾಲಯ ಮೇಲ್ವಿಚಾರಕರು ಸ್ವತಂತ್ರ ಭಾರತ ಚಳುವಳಿಗೆ ಕೊಡುಗೆ ನೀಡಿದ ಕರ್ನಾಟಕದ ಸ್ವಾತಂತ್ರ್ಯ ಹೋರಾಟಗಾರರನ್ನು ಸ್ಥಳೀಯ ಹಿರಿಯರು, ಶಾಲಾ ಶಿಕ್ಷಕರು ಇವರುಗಳ ಮೂಲಕ ಪರಿಚಯಿಸಬೇಕು. ಅವರ ವ್ಯಕ್ತಿತ್ವವನ್ನು ವಿವರಿಸಿ, ಉತ್ತಮ ನಾಗರಿಕರಾಗಿ ದೇಶಕ್ಕೆ ಹೇಗೆ ಕೊಡುಗೆ ನೀಡಬಹುದು ಎಂಬುದನ್ನು ಮಕ್ಕಳು ಅರಿಯುವಂತೆ ಪ್ರೇರೇಪಿಸಬೇಕು.
- ಆಗಸ್ಟ ತಿಂಗಳಲ್ಲಿ ಪೂರ್ಣವಾಗಿ ಸ್ವಾತಂತ್ರೋತ್ಸವ ಸಂಭ್ರಮವನ್ನು ಆಚರಿಸುವುದು. ಗ್ರಂಥಾಲಯ ಮೇಲ್ವಿಚಾರಕರು ದೇಶಭಕ್ತಿ, ಸಾಮಾಜಿಕ ಕಾಳಜಿಯುಳ್ಳ ದೇಶಭಕ್ತರ ಚಲನಚಿತ್ರಗಳನ್ನು ಪ್ರದರ್ಶಿಸಲು ಕ್ರಮ ವಹಿಸುವುದು.
- **ನಾನು ಮತ್ತು ನನ್ನ ದೇಶ–** ಗ್ರಂಥಾಲಯದಲ್ಲಿ ಮಕ್ಕಳು ಸ್ವಾತಂತ್ರ್ಯ ಹೋರಾಟ ಮತ್ತು ಸ್ವತಂತ್ರ ಭಾರತವನ್ನು ಹೇಗೆ ಅರ್ಥಮಾಡಿಕೊಂಡಿದ್ದಾರೆಂದು ಚರ್ಚೆಗಳನ್ನು ನಡೆಸಬಹುದು. ಚರ್ಚೆಯು ಮಕ್ಕಳ ಕೇಂದ್ರೀಕೃತವಾಗಿ, ಮಕ್ಕಳಲ್ಲಿ ದೇಶಭಕ್ತಿ ಮತ್ತು ಆರೋಗ್ಯಕರ ಸಮಾಜ ನಿರ್ಮಾಣ ಅಂಶಗಳ ವೃದ್ಧಿಗೆ ಪೂರಕವಾಗುವುದು.

ಈ ಮೇಲ್ಕಂಡಂತೆ 2023ರ ಭಾರತ ಸ್ವಾತಂತ್ರ್ಯ ದಿನಾಚರಣೆಯನ್ನು ಗ್ರಾಮ ಪಂಚಾಯತಿ ಗ್ರಂಥಾಲಯಗಳಲ್ಲಿ ಆಗಸ್ಟ ಮಾಹೆಯಲ್ಲಿ ಪೂರ್ಣವಾಗಿ ಆಚರಿಸಲು ಕ್ರಮ ವಹಿಸುವುದು.

ಆಯುಕ್ತರು
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ
ಬೆಂಗಳೂರು.

**ಇವರಿಗೆ:**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ (ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
3. ರಾಜ್ಯದ ಎಲ್ಲಾ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ (ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
4. ಗ್ರಾಮ ಪಂಚಾಯಿತಿಯ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ(ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮುಖಾಂತರ)
5. ಮಾಹಿತಿ ಕೇಂದ್ರ/ವೆಬ್ಸೈಟ್, ಗ್ರಾಂಅಪ ಇಲಾಖೆ.
6. ಮಾಹಿತಿ ಕೇಂದ್ರ/ವೆಬ್‌ಸೈಟ್, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು(ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಇವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ಇವರ ಆಪ್ತ ಸಹಾಯಕರಿಗೆ.
4. ಕಛೇರಿ ಪ್ರತಿ.